ಕೆ. ಎಂ. ಸಿ. ಮಣಿಪಾಲ	300	--
7) ಬಿ. ಎಲ್. ಡಿ. ಇ. ವೈದ್ಯಕೀಯ ಮಹಾವಿದ್ಯಾಲಯ,ಬಿಜಾಪುರ	180	--
8) ಜೆ. ಜೆ. ಎಂ. ವೈದ್ಯಕೀಯ ಮಹಾವಿದ್ಯಾಲಯ, ದಾವಣಗೆರೆ	320	72
9) ಜೆ. ಎನ್. ವೈದ್ಯಕೀಯ ಮಹಾವಿದ್ಯಾಲಯ, ಬೆಳಗಾಂ	195	50
10) ಎಂ. ಆರ್. ವೈದ್ಯಕೀಯ ಮಹಾವಿದ್ಯಾಲಯ, ಗುಲ್ಬರ್ಗಾ	175	50
11) ಎಂ.ಎಸ್. ರಾಮಯ್ಯ ವೈದ್ಯಕೀಯ ಮಹಾವಿದ್ಯಾಲಯ,ಬೆಂಗಳೂರು	110	--
12) ಸೆಂಟ್‌ಜಾನ್ಸ್ ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು	60	--
13) ಸಿದ್ಧಾರ್ಥ ವೈದ್ಯಕೀಯ ಮಹಾವಿದ್ಯಾಲಯ , ತುಮಕೂರು	195	22
14) ಜೆ. ಎಸ್. ಎಸ್. ವೈದ್ಯಕೀಯ ಮಹಾವಿದ್ಯಾಲಯ, ಮೈಸೂರು	200	5

ವಿಷಯ: ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮೇಲ್ದರ್ಜೀಕರಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1374 (2035)

ಶ್ರೀ ಬಸಂತ. ವಿ. ಸಾಲಿಯಾನ (ಕಾಪು) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಿಲ್ಲಾ ಪರಿಷತ್ ಅಸ್ಥಿತ್ವಕ್ಕೆ ಬಂದ ನಂತರ ಎಷ್ಟು ಪ್ರಾಥಮಿಕ ಆರೋಗ್ಯ ಘಟಕಗಳನ್ನು ಆರೋಗ್ಯ ಕೇಂದ್ರಗಳಾಗಿ ಮೇಲ್ದರ್ಜೆಗೆ ಏರಿಸಲಾಗಿದೆ . ಇದಕ್ಕೆ ಸರ್ಕಾರದ ಮಂಜೂರಾತಿ ಇದೆಯೇ; ಇವುಗಳಿಗೆ ಕನಿಷ್ಟ ಸೌಲಭ್ಯಗಳನ್ನು ಒದಗಿಸಲಾಗಿದೆಯೆ ?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) 67, ಇವುಗಳಲ್ಲಿ 45 ಆರೋಗ್ಯ ಕೇಂದ್ರಗಳಿಗೆ ಕನಿಷ್ಠ ಸೌಲಭ್ಯಗಳನ್ನು ಒದಗಿಸಲಾಗಿದೆ. ಇನ್ನುಳಿದ 22 ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕನಿಷ್ಠ ಸೌಲಭ್ಯಗಳನ್ನು ಒದಗಿಸುವ ವಿಷಯವು ಪರಿಶೀಲನೆಯಲ್ಲಿದೆ.

ವಿಷಯ: ಗಾರ್ಮೆಂಟ್ ಎಕ್ಸ್‌ಪೋರ್ಟ್ ಉದ್ಯಮಗಳಲ್ಲಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1375 (2058)

ಶ್ರೀ ಡಿ. ಬಿ. ಚಂದ್ರೇಗೌಡ (ತೀರ್ಥಹಳ್ಳಿ) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿರುವ ಗಾರ್ಮೆಂಟ್ ಎಕ್ಸ್‌ಪೋರ್ಟ್ ಉದ್ದಿಮೆಗಳೆಷ್ಟು ?

ಆ) ಈ ಉದ್ದಿಮೆಗಳು ಕನಿಷ್ಠ ವೇತನ ನೀಡದೇ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಹಾಗಿದ್ದಲ್ಲಿ , ಈ ಉದ್ದಿಮೆಗಳಲ್ಲಿ ಕನಿಷ್ಠ ವೇತನ ನೀಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎ. ಎಸ್. ನಾಡಗೌಡ (ಕಾರ್ಮಿಕ ರಾಜ್ಯ ಸಚಿವರು)

ಅ) 600

ಆ) ಹೌದು.

ಇ) ಕೆಲವು ಉದ್ದಿಮೆಗಳಲ್ಲಿ ಕನಿಷ್ಠ ವೇತನ ನೀಡದ ಬಗ್ಗೆ ದೂರುಗಳು ಬಂದಿದ್ದು, ಅವುಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.

ವಿಷಯ: ಸರ್ಕಾರಿ ಸೇವೆಯಲ್ಲಿರುವ ವೈದ್ಯರಿಗೆ ಖಾಸಗಿ ಪ್ರಾಕ್ಟೀಸ್ ಬಂದ್.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1329 (2064)